ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

44

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಟೀಕಿಸಿದಷ್ಟೂ ಆರೆಸ್ಸೆಸ್ ಶಕ್ತಿ ಪ್ರಬಲ

ವಿಕ ಸುದ್ದಿಲೋಕ ಬೆಂಗಳೂರು

ಕಾಂಗ್ರೆಸ್ ನಾಯಕರು ಆರ್‌ಎಸ್‌ಎಸ್ ಬಗ್ಗೆ ಎಷ್ಟು ಹೆಚ್ಚು ಮಾತನಾಡುತ್ತಾರೋ ಅಷ್ಟು ಬಾರಿ ಆರ್‌ಎಸ್‌ಎಸ್ ಪ್ರಬಲಗೊಳ್ಳುತ್ತ ಇರುತ್ತದೆ ಎಂದು ಸಿಎಂ ಯಡಿಯೂರಪ್ಪ ಎದಿರೇಟು ನೀಡಿದ್ದಾರೆ.



ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿ, "ನಾನು ಸಿಎಂ ಸ್ಥಾನಕ್ಕೆ ಬರಲು ಆರ್‌ಎಸ್‌ಎಸ್ ಶಿಕ್ಷಣ ಕಾರಣ. ಪ್ರಧಾನಿ ಮೋದಿಯವರೂ ಆರ್‌ಎಸ್‌ಎಸ್ ಹಿನ್ನೆಲೆಯಿಂದ ಬಂದಿದ್ದಾರೆ," ಎಂದರು.

"ಆರ್‌ಎಸ್‌ಎಸ್ ಬಗ್ಗೆ ಮಾತನಾಡಿದರೆ ಅವರಿಗೆ ಏನೂ ಪ್ರಯೋಜನವಾಗುವುದಿಲ್ಲ. ಕೆಲವರಿಗೆ ಆರ್‌ಎಸ್‌ಎಸ್ ವಿರುದ್ಧ ಮಾತನಾಡುವುದು ಅಭ್ಯಾಸವಾಗಿದೆ," ಎಂದರು.

"ಸಿದ್ದರಾಮಯ್ಯ ಯಾವಾಗಲೂ ಆರ್‌ಎಸ್‌ಎಸ್ ವಿರುದ್ಧ ಬೊಬ್ಬೆ ಹೊಡೆಯುತ್ತಾರೆ. ತತ್ವ, ಸಿದ್ಧಾಂತದಡಿಯ ಸಂಘಟನೆ ಆರ್‌ಎಸ್‌ಎಸ್‌ನಿಂದ ನಾನು ಕಲಿತುಕೊಂಡಿದ್ದೇನೆ. ಬಾಯಿಗೆ ಬಂದಂತೆ ಮಾತನಾಡುವುದು ಪ್ರತಿಪಕ್ಷದ ನಾಯಕರಿಗೆ ಶೋಭೆಯಲ್ಲ," ಎಂದು ಹೇಳಿದರು.

"ಕಾಂಗ್ರೆಸ್ ನಾಯಕರು ತಮ್ಮ ಪಕ್ಷದ ಅಸಮಾಧಾನ ಬಗೆಹರಿಸಿಕೊಳ್ಳಲಿ. ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ನಾಯಕರು ಅವರ ಪಕ್ಷ ಬಲಪಡಿಸುವ ಕೆಲಸ ಮಾಡಿಕೊಳ್ಳಲಿ," ಎಂದು ಹೇಳಿದರು.